ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಚಿವ ಸಂಪುಟ (ಕೇಂದ್ರ)

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ

ದಿನಾಂಕ : DATE : 04/07/2019

# ವಾಣಿಜ್ಯ ಉದ್ದೇಶದ ಬಾಡಿಗೆ ತಾಯ್ತನ ನಿಷೇಧ ಮಸೂದೆಗೆ ಸಂಪುಟ ಅಸ್ತು

ಪ್ರ.ವಾ. 4/7/19

ನವದೆಹಲಿ (ಪಿಟಿಐ): ವಾಣಿಜ್ಯ ಉದ್ದೇಶದ ಬಾಡಿಗೆ ತಾಯ್ತನವನ್ನು ನಿಷೇಧಿಸುವ ಮತ್ತು ಸಮೀಪದ ಸಂಬಂಧಿಗೆ ಮಾತ್ರ ಬಾಡಿಗೆ ತಾಯಿಯಾಗಲು ಅವಕಾಶ ಕಲ್ಪಿಸುವ 'ಬಾಡಿಗೆ ತಾಯ್ತನ (ನಿಯಂತ್ರಣ) ಮಸೂದೆ- 2019'ಕ್ಕೆ ಕೆಂದ್ರ ಸಚಿವ ಸಂಪುಟ ಬುಧವಾರ ಅನುಮೋದನೆ ನೀಡಿದೆ.

'ಕೇಂದ್ರದಲ್ಲಿ 'ರಾಷ್ಟ್ರೀಯ ಬಾಡಿಗೆ ತಾಯ್ತನ ಮಂಡಳಿ' ಹಾಗೂ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶ ಮಟ್ಟದಲ್ಲಿ 'ರಾಜ್ಯಮಟ್ಟದ ಮಂಡಳಿ'ಗಳನ್ನು ಸ್ಥಾಪಿಸುವ ಮೂಲಕ ಬಾಡಿಗೆ ತಾಯ್ತನ ವ್ಯವಸ್ಥೆಯನ್ನು ನಿಯಂತ್ರಿಸುವ ಪ್ರಸ್ತಾವ ಮಸೂದೆಯಲ್ಲಿದೆ' ಎಂದು ಅಧಿಕಾರಿಗಳು ತಿಳಿಸಿದ್ದಾರೆ.

'ಉದ್ದೇಶಿತ ಕಾನೂನು, ವಾಣಿಜ್ಯ ಉದ್ದೇಶದ ಬಾಡಿಗೆ ತಾಯ್ತನವನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವುದರ ಜೊತೆಗೆ, ಬಂಜೆತನದಿಂದ ಬಳಲುವ ಭಾರತೀಯ ದಂಪತಿಗೆ ನೈತಿಕ ರೀತಿಯಲ್ಲಿ ಮಕ್ಕಳನ್ನು ಪಡೆಯಲು ನೆರವಾಗಲಿದೆ. ವಾಣಿಜ್ಯ ಉದ್ದೇಶದ ಬಾಡಿಗೆ ತಾಯ್ತನವನ್ನು ನಿಷೇಧಿಸುವುದರಿಂದ ಮಾನವ ಭ್ರೂಣ ಹಾಗೂ ವೀರ್ಯದ ಮಾರಾಟ ಮತ್ತು ಖರೀದಿಯೂ ನಿಷೇಧಗೊಳ್ಳುತ್ತದೆ. ಆದರೆ ಬಾಡಿಗೆ ತಾಯ್ತನದ ಅಗತ್ಯವಿರುವ ದಂಪತಿಗೆ ಕೆಲವು ನಿಬಂಧನೆಗಳಡಿ ಬಾಡಿಗೆ ತಾಯ್ತನದ ಮೂಲಕ ಮಕ್ಕಳನ್ನು ಪಡೆಯಲು ಅನುಮತಿ ನೀಡಲಾಗುವುದು. ಬಾಡಿಗೆ ತಾಯಿಯಾಗಿ ಮಗುವನ್ನು ಹೆತ್ತುಕೊಡುವ ಮಹಿಳೆ ಮತ್ತು ಆ ಮೂಲಕ ಹುಟ್ಟಿದ ಮಗು ಶೋಷಣೆಗೆ ಒಳಗಾಗುವುದನ್ನು ಸಹ ಉದ್ದೇಶಿತ ಕಾನೂನು ತಡೆಯುತ್ತದೆ' ಎಂದು ಅಧಿಕಾರಿ ತಿಳಿಸಿದರು.

ಲೋಕಸಭೆಯಲ್ಲಿ 2018ರ ಡಿಸೆಂಬರ್‌ನಲ್ಲಿ ಈ ಮಸೂದೆಯನ್ನು ಅಂಗೀಕರಿಸಲಾಗಿತ್ತು. 16ನೇ ಲೋಕಸಭೆ ವಿಸರ್ಜನೆಯಾದ್ದರಿಂದ ಈಗ ಮಸೂದೆಯನ್ನು ಪುನಃ ಮಂಡಿಸಬೇಕಾಗಿ ಬಂದಿದೆ.

## ಮಂಗಳೂರು ವಿಮಾನ ನಿಲ್ದಾಣ ಖಾಸಗೀಕರಣಕ್ಕೆ ಒಪ್ಪಿಗೆ

ಮಂಗಳೂರು, ಅಹಮದಾಬಾದ್ ಹಾಗೂ ಲಖನೌ ವಿಮಾನ ನಿಲ್ದಾಣಗಳ ನಿರ್ವಹಣೆಯ ಗುತ್ತಿಗೆಯನ್ನು ಖಾಸಗಿಯವರಿಗೆ ನೀಡುವ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ (ಎಎಐ) ಪ್ರಸ್ತಾವಕ್ಕೆ ಕೇಂದ್ರ ಸಂಪುಟವು ಬುಧವಾರ ಒಪ್ಪಿಗೆ ಸೂಚಿಸಿದೆ. ಸರ್ಕಾರ ಮತ್ತು ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಈ ವಿಮಾನ ನಿಲ್ದಾಣಗಳ ನಿರ್ವಹಣೆಗೆ ಸರ್ಕಾರ ಮುಂದಾಗಿದ್ದು, 50 ವರ್ಷಗಳ ಅವಧಿಗೆ ನಿರ್ವಹಣಾ ಗುತ್ತಿಗೆಯನ್ನು ಅದಾನಿ ಸಂಸ್ಥೆ ಪಡೆದಿತ್ತು.

ಈ ಮೂರು ವಿಮಾನ ನಿಲ್ದಾಣಗಳಲ್ಲದೆ, ಎಎಐ ಅಧೀನದಲ್ಲಿರುವ ಜೈಪುರ, ಗುವಾಹಟಿ ಹಾಗೂ ತಿರುವನಂತಪುರ ವಿಮಾನ ನಿಲ್ದಾಣಗಳ ನಿರ್ವಹಣೆಯ ಗುತ್ತಿಗೆಯನ್ನು ಸಹ ಅದಾನಿ ಸಂಸ್ಥೆ ಪಡೆದುಕೊಂಡಿದೆ.

'ಮೂರು ವಿಮಾನಗಳ ನಿರ್ವಹಣೆಯನ್ನು ಖಾಸಗಿಯವರಿಗೆ ವಹಿಸುವ ಪ್ರಸ್ತಾವಕ್ಕೆ ಕೇಂದ್ರ ಸಂಪುಟ ಅನುಮತಿ ನೀಡಿದೆ' ಎಂದು ಸರ್ಕಾರದ ವಕ್ತಾರ ಸೀತಾಂಶು ಕೌರ್ ಟ್ವೀಟ್ ಮಾಡಿದ್ದಾರೆ.